ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	25
2.	ಮಾನ್ಯ ಸದಸ್ಯರ ಹೆಸರು	ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
3.	ಉತ್ತರಿಸಬೇಕಾದ ದಿನಾಂಕ	21/09/2020
4.	ಉತ್ತರಿಸುವವರು	ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಾರ್ಮಿಕರಿಗೆ ಸರ್ಕಾರ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಣೆ ಮಾಡಿದ ಸಹಾಯ ಧನವು ಇನ್ನೂ ಕೆಲವು ಕಾರ್ಮಿಕರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : ಬಂದಿದ್ದಲ್ಲಿ ಅದನ್ನು ಯಾವಾಗ ತಲುಪಿಸಲಾಗುತ್ತದೆ :	ಹೌದು. ತಾಂತ್ರಿಕ ಕಾರಣಗಳಿಂದ ಸರ್ಕಾರ ಘೋಷಿಸಿರುವ ಸಹಾಯಧನ ತಲುಪದಿರುವ ನಿರ್ಮಾಣ ಕಾರ್ಮಿಕರಿಂದ ಅಗತ್ಯ ದಾಖಲೆಗಳಾದ ಅಂದರೆ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ ಹಾಗೂ ಆಧಾರ್‌ಕಾರ್ಡ್‌ಗಳ ಪ್ರತಿಗಳನ್ನು ಪಡೆದು ಸಹಾಯಧನ ತಲುಪಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಇದಲ್ಲದೆ, ಸಹಾಯಧನಕ್ಕಾಗಿ ಅಗಸ ವೃತ್ತಿ ನಿರ್ವಹಿಸುತ್ತಿರುವ 74,782 ಮತ್ತು ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ 66,820 ಅರ್ಜಿದಾರರು ಸೇರಿದಂತೆ ಒಟ್ಟು 1,41,602 ಫಲಾನುಭವಿ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಅವುಗಳಲ್ಲಿ ದಿನಾಂಕ:15-08-2020ರವರೆಗೆ 1,14,388 ಅರ್ಜಿದಾರರಿಗೆ ಸಿಗದುತ ಅಂತಿಮ ತಲಾ ರೂ.5,000/-ಗಳಂತೆ ಒಟ್ಟು ರೂ.57.19ಕೋಟಿ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ವರ್ಗಾಯಿಸಲಾಗಿದೆ. ತಾಂತ್ರಿಕ ಕಾರಣಗಳ ಹಾಗೂ ಷರತ್ತುಗಳನ್ನು ಪೂರೈಸದಿರುವುದು ಹಾಗೂ ಕ್ರಮಬದ್ಧವಲ್ಲದ 25,290 ಅರ್ಜಿಗಳನ್ನು ಪರಿಶೀಲನೆ ನಡೆಸಲಾಗುತ್ತಿದ್ದು, ಸೂಕ್ತ ದಾಖಲೆಗಳನ್ನು ನೀಡಿದ ಅರ್ಹ ಫಲಾನುಭವಿಗಳಿಗೆ ನೆರವಿನ ಮೊತ್ತವನ್ನು ತ್ವರಿತವಾಗಿ ಪಾವತಿಸಲು ಕ್ರಮಕೈಗೊಳ್ಳಲಾಗುವುದು.
(ಆ)	ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಲಾಕ್‌ಡೌನ್ ಸಂದರ್ಭದಲ್ಲಿ ನೀಡಿದ ಕಾರ್ಮಿಕ ಕಿಟ್‌ಗಳ ಸಂಖ್ಯೆ ಎಷ್ಟು : ಇದಕ್ಕಾಗಿ ಸರ್ಕಾರ ಎಷ್ಟು ಹಣ ವೆಚ್ಚ ಮಾಡಿದೆ : (ವಿವರ ನೀಡುವುದು)	<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u> ಲಾಕ್‌ಡೌನ್ ಸಂದರ್ಭದಲ್ಲಿ ಮಂಡಳಿಯಿಂದ 6.08 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿರುತ್ತದೆ. ಇದಕ್ಕಾಗಿ ರೂ.46.12 ಕೋಟಿ ಮೊತ್ತವನ್ನು ಮಂಡಳಿಯಿಂದ ಭರಿಸಲಾಗಿರುತ್ತದೆ. <u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ</u> ಮೂಲಕ ಲಾಕ್‌ಡೌನ್ ಸಂದರ್ಭದಲ್ಲಿ ಪ್ರತ್ಯೇಕವಾಗಿ ಅಸಂಘಟಿತ ಕಾರ್ಮಿಕರಿಗೆ ಆಹಾರದ ಕಿಟ್‌ಗಳನ್ನು ವಿತರಿಸಿರುವುದಿಲ್ಲ. ಆದರೆ, ಕೋವಿಡ್-19ರ

		ಕಾರಣ ಲಾಕ್‌ಡೌನ್ ಜಾರಿಗೊಳಿಸಿದ ಹಿನ್ನೆಲೆಯಲ್ಲಿ ಸಂಕಷ್ಟಕ್ಕೊಳಗಾದ ಅಸಂಘಟಿತ ವಲಯದ ಕಾರ್ಮಿಕರು ಸೇರಿದಂತೆ, ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ಸಿದ್ಧಪಡಿಸಿದ ಆಹಾರ ಹಾಗೂ ಪಡಿತರ ಕಿಟ್ ವಿತರಿಸಲಾಗಿದೆ. ಅವುಗಳಲ್ಲಿ, ಅಸಂಘಟಿತ ವಲಯದ ವಲಸೆ ಕಾರ್ಮಿಕರ ಪ್ರತ್ಯೇಕ ದತ್ತಾಂಶ ಲಭ್ಯವಿರದ ಕಾರಣ, ಸರ್ಕಾರದ ಆದೇಶ ಸಂಖ್ಯೆ: ಕಾಇ/187 ಎಲ್‌ಇಟಿ/2020, ದಿನಾಂಕ: 11-06-2020ರನ್ವಯ ಸದರಿ ವರ್ಗದ ಕಾರ್ಮಿಕರಿಗೆ ವಿತರಿಸಿದ ಸಿದ್ಧಪಡಿಸಿದ ಆಹಾರ ಹಾಗೂ ಪಡಿತರ ಕಿಟ್‌ಗಳ ವೆಚ್ಚವೆಂದು ರೂ. 5.00 ಕೋಟಿ ಮೊತ್ತವನ್ನು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸಲಾಗಿದೆ.
(ಇ)	ಕಾರ್ಮಿಕ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; ಖರ್ಚಾದ ಹಣ ಎಷ್ಟು? (ಸಂಪೂರ್ಣ ವಿವರ ನೀಡುವುದು)	ಅಗಸರು ಮತ್ತು ಕ್ಷೌರಿಕರಿಗೆ ನೆರವಾಗಲು ಸರ್ಕಾರದಿಂದ 18 ಕೋಟಿ ಅನುದಾನ ಬಿಡುಗಡೆಯಾಗಿದೆ. ಕ್ಷೌರಿಕ ಹಾಗೂ ಅಗಸ ವೃತ್ತಿಯಲ್ಲಿರುವ 1,41,602 ಕಾರ್ಮಿಕರಿಂದ ಅರ್ಜಿಗಳನ್ನು ಸ್ವೀಕರಿಸಿದ್ದು, 1,14,388 ಅರ್ಜಿದಾರರಿಗೆ ಪಾವತಿಸಲು ರೂ.57.19,ಕೋಟಿ ಮೊತ್ತವನ್ನು ಮಂಡಳಿಯ ಮೂಲಕ ವೆಚ್ಚ ಮಾಡಲಾಗಿದೆ. ವೆಚ್ಚ ಮಾಡಿದ ಹೆಚ್ಚುವರಿ ಅನುದಾನವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 178 ಇಎಕ್ಸ್‌ಪಿ.9/2020, ದಿನಾಂಕ: 12-06-2020ರ ಅನ್ವಯ ಮಂಡಳಿಯ ಇತರೆ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದಿಂದ ಬಳಸಿಕೊಳ್ಳಲಾಗಿದೆ. ಲಾಕ್‌ಡೌನ್ ಸಮಯದಲ್ಲಿ ಸಂಕಷ್ಟಕ್ಕೆ ಒಳಗಾದ ಕಾರ್ಮಿಕರಿಗೆ ಒದಗಿಸಲಾದ ಆಹಾರ ಧಾನ್ಯ ಅಥವಾ ಇನ್ನಿತರೆ ಉದ್ದೇಶಗಳಿಗೆ ಕಟ್ಟಡ ಮತ್ತು ಇತರೆ ಕಾರ್ಮಿಕರಿಗೆ ನೆರವಾಗಲು ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ನೀಡಲಾದ ಎಲ್ಲಾ ಸೌಲಭ್ಯಗಳ ಎಲ್ಲಾ ವೆಚ್ಚಗಳನ್ನು ಮಂಡಳಿಯಲ್ಲಿ ಸೆಸ್ ಮೂಲಕ ಸಂಗ್ರಹಿಸಲಾಗಿರುವ ಕಲ್ಯಾಣ ನಿಧಿಯಿಂದ ಭರಿಸಲಾಗಿದೆ.

ಕಾಇ 296 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು